ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019 / 1773

ನಿರ್ದೇಶಕರವರ ಕಚೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ:15-06-2020.

## ಹಿಂಬರಹ

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 10 ಎಸ್‌ಆರ್‌ಪಿ 2020 ಬೆಂಗಳೂರು ದಿನಾಂಕ: 5ನೇ ಮೇ 2020 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆಪ್ ಸಂಸ್ಥೆ ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ (ಇಲಾಖಾ ವೆಬ್‌ಸೈಟ್ ಮುಖಾಂತರ)
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
5. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನೌಕರರು ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಯ ನ್ಯಾಯಾಂಗ ಅಧಿಕಾರಿಗಳು ಹಾಗೂ ನಿವೃತ್ತ ನ್ಯಾಯಾಂಗ ಅಧಿಕಾರಿಗಳನ್ನೂ ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರು ಮತ್ತು ನಿವೃತ್ತಿ ವೇತನದಾರರಿಗೆ ಲಭ್ಯವಿರುವ ತುಟ್ಟಿಭತ್ಯೆ ದರಗಳನ್ನು ಜೂನ್ 2021ರವರೆಗೆ ಸ್ಥಗಿತಗೊಳಿಸುವ ಬಗ್ಗೆ.

ಓದಲಾಗಿದೆ:
(1) ದಿನಾಂಕ: 19.04.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಎಸ್‌ಆರ್‌ಪಿ 2018
(2) ದಿನಾಂಕ: 19.10.2019ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 15 ಎಸ್‌ಆರ್‌ಪಿ 2019
(3) ದಿನಾಂಕ: 25.10.2019ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 16 ಎಸ್‌ಆರ್‌ಪಿ 2019
(4) ದಿನಾಂಕ: 02.11.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 17 ಎಸ್‌ಆರ್‌ಪಿ 2019
(5) ದಿನಾಂಕ: 04.11.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 19 ಎಸ್‌ಆರ್‌ಪಿ 2019
(6) ಭಾರತ ಸರ್ಕಾರದ ದಿನಾಂಕ 23.04.2020ರ ಅಧಿಕೃತ ಜ್ಞಾಪನಾ ಸಂಖ್ಯೆ: 1/1/2020-E-II(B).

ಪ್ರಸ್ತಾವನೆ:

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ರಾಜ್ಯ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ ತುಟ್ಟಿಭತ್ಯೆಯನ್ನು ಭಾರತ ಸರ್ಕಾರವು ಕಾಲದಿಂದ ಕಾಲಕ್ಕೆ ಹೊರಡಿಸುವ ತುಟ್ಟಿಭತ್ಯೆ ಆದೇಶಗಳಿಗೆ ಅನುಸಾರವಾಗಿ ಆಯೋಗವು ಶಿಫಾರಸ್ಸು ಮಾಡಿರುವ ಸೂತ್ರವನ್ನು ಅಳವಡಿಸಿಕೊಂಡು ಮಂಜೂರು ಮಾಡಲಾಗುತ್ತಿದೆ. ಇದೇ ರೀತಿ ಯುಜಿಸಿ/ಐಸಿಎಆರ್/ಎಐಸಿಟಿಇ/ಎನ್‌ಜೆಪಿಸಿ ವೇತನ ಶ್ರೇಣಿಗಳಿಗೆ ಸಂಬಂಧಿಸಿದ ನೌಕರರು ಮತ್ತು ನಿವೃತ್ತ ನ್ಯಾಯಾಂಗ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಸಹ ತುಟ್ಟಿಭತ್ಯೆಯನ್ನು ಭಾರತ ಸರ್ಕಾರವು ಕಾಲದಿಂದ ಕಾಲಕ್ಕೆ ಹೊರಡಿಸಿರುವ ಆದೇಶಗಳಿಗೆ ಅನುಸಾರವಾಗಿ ಕ್ರಮಬದ್ಧಗೊಳಿಸಲಾಗುತ್ತಿದೆ.

ಕೋವಿಡ್-19 ರಿಂದ ಉಂಟಾದ ಸಂಕಷ್ಟಗಳ ಹಿನ್ನೆಲೆಯಲ್ಲಿ ಮೇಲೆ (6)ರಲ್ಲಿ ಓದಲಾದ ದಿನಾಂಕ 23.04.2020ರ ಅಧಿಸೂಚನೆಯಲ್ಲಿ ಕೇಂದ್ರ ಸರ್ಕಾರದ ನೌಕರರು ಮತ್ತು ಪಿಂಚಣಿದಾರರಿಗೆ ಪ್ರಸ್ತುತ ಚಾಲ್ತಿಯಲ್ಲಿರುವ ದಿನಾಂಕ 01.07.2019ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾದ ತುಟ್ಟಿಭತ್ಯೆ ದರ ಮತ್ತು ತುಟ್ಟಿಭತ್ಯೆ ಪರಿಹಾರ ದರಗಳಿಗೆ ಸೀಮಿತಗೊಳಿಸಿ ತುಟ್ಟಿಭತ್ಯೆ ದರಗಳನ್ನು ಸ್ಥಗಿತಗೊಳಿಸಿ ಭಾರತ ಸರ್ಕಾರವು ಆದೇಶಗಳನ್ನು ಹೊರಡಿಸಿರುತ್ತದೆ.

ಆದುದರಿಂದ ಈ ಕೆಳಗಿನಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 10 ಎಸ್‌ಆರ್‌ಪಿ 2020,**
**ಬೆಂಗಳೂರು, ದಿನಾಂಕ 5ನೇ ಮೇ 2020.**

ಯುಜಿಸಿ/ಐಸಿಎಆರ್/ಎಐಸಿಟಿಇ/ಎನ್‌ಜೆಪಿಸಿ ವೇತನ ಶ್ರೇಣಿಗಳ ನೌಕರರು ಮತ್ತು ಪಿಂಚಣಿದಾರರನ್ನು ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ ದಿನಾಂಕ 01.01.2020ರಿಂದ ಜಾರಿಗೆ ಬರುವಂತೆ ಲಭ್ಯವಿರುವ ತುಟ್ಟಿಭತ್ಯೆಯ ಹೆಚ್ಚುವರಿ ಕಂತುಗಳನ್ನು ಪಾವತಿಸತಕ್ಕದ್ದಲ್ಲ. ದಿನಾಂಕ 01.07.2020 ಮತ್ತು ದಿನಾಂಕ 01.01.2021ರಿಂದ ಲಭ್ಯವಿರುವ/ಲಭ್ಯವಾಗಬಹುದಾದ ತುಟ್ಟಿಭತ್ಯೆಯ ಹೆಚ್ಚುವರಿ ಕಂತುಗಳನ್ನು

ಸಹ ಮುಂದಿನ ಆದೇಶಗಳವರೆಗೆ ಬಿಡುಗಡೆ ಮಾಡತಕ್ಕದ್ದಲ್ಲ. ಆದರೆ, ಚಾಲ್ತಿಯಲ್ಲಿರುವ ತುಟ್ಟಿಭತ್ಯೆ ದರಗಳು ಮುಂದುವರೆದು ಅನ್ವಯಿಸುತ್ತದೆ.

2. 1ನೇ ಜುಲೈ 2021 ರಿಂದ ಲಭ್ಯವಿರುವ ತುಟ್ಟಿ ಭತ್ಯೆಯ ಮುಂದಿನ ಹೆಚ್ಚುವರಿ ಕಂತುಗಳನ್ನು ಬಿಡುಗಡೆ ಮಾಡುವ ಸಂಬಂಧ ಭಾರತ ಸರ್ಕಾರವು ನಿರ್ಧಾರ ತೆಗೆದುಕೊಂಡಲ್ಲಿ, 1ನೇ ಜನವರಿ 2020, 1ನೇ ಜುಲೈ 2020 ಮತ್ತು 1ನೇ ಜನವರಿ 2021ರಿಂದ ಅನ್ವಯಿಸುವ ತುಟ್ಟಿಭತ್ಯೆ ದರಗಳನ್ನು ಭವಿಷ್ಯಾವರ್ತಿಯಾಗಿ ಪುನರ್‌ಸ್ಥಾಪಿಸಲಾಗುವುದು ಮತ್ತು ಇದು 1ನೇ ಜುಲೈ 2021ರಿಂದ ಅನ್ವಯವಾಗುವ ಕ್ರೋಢೀಕೃತ ದರದಲ್ಲಿ ವಿಲೀನಗೊಳ್ಳುತ್ತದೆ. 1ನೇ ಜನವರಿ 2020 ರಿಂದ 30ನೇ ಜೂನ್ 2021ರವರೆಗಿನ ತುಟ್ಟಿಭತ್ಯೆ ಬಾಕಿಯನ್ನು ಪಡೆಯಲು ನೌಕರರು ಮತ್ತು ನಿವೃತ್ತಿ ವೇತನದಾರರು ಅರ್ಹರಿರುವುದಿಲ್ಲ.

3. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

4. ಕಾಲದಿಂದ ಕಾಲಕ್ಕೆ ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳನ್ವಯ ಅನ್ವಯಿಸುವ ತುಟ್ಟಿಭತ್ಯೆ ದರಗಳನ್ನು ಕ್ರಮಬದ್ಧಗೊಳಿಸಲ್ಪಡುವ ರಾಜ್ಯ ಸರ್ಕಾರದ ನಿಗಮ/ಮಂಡಳಿ/ಸ್ಥಳೀಯ ಸಂಸ್ಥೆಗಳು, ಸರ್ಕಾರಿ/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಮತ್ತು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರಡಿ ಬರುವ ನೌಕರರಿಗೂ ಸಹ ಈ ಆದೇಶಗಳು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಸ್.ಜೋಗೋಜಿ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.

10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
22. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
23. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**